## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 23 ಗ್ರಾಪಂಕಾ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02-02-2019.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತಿ,
ರಾಮನಗರ ಜಿಲ್ಲೆ.

ಮಾನ್ಯರೆ,

ವಿಷಯ: ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಸ್ಥಳೀಯ ಮಟ್ಟದಲ್ಲಿ ವರ್ಗಾವಣೆ / ನಿಯೋಜನೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018 (ಭಾಗ-1) ದಿನಾಂಕ: 23-11-2018.
2) ರಾಮನಗರ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಅಧಿಕೃತ ಜ್ಞಾಪನ ಸಂಖ್ಯೆ:ಕಾನಿಅ/ತಾಪಂರಾ/ಸಿ-3/ಸಿಆರ್-1055/2018-19,ದಿ:02-01-2019.
3) ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 384 ಗ್ರಾಪಂಕಾ 2018 (ಭಾಗ-1) ದಿನಾಂಕ: 04-01-2019.

***

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ಗಮನ ಸೆಳೆಯುತ್ತಾ, ಉಲ್ಲೇಖ(1) ರ ದಿನಾಂಕ:23-11-2018 ರ ಸರ್ಕಾರದ ಪತ್ರದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಸ್ಥಳೀಯ ಮಟ್ಟದಲ್ಲಿ ವರ್ಗಾವಣೆ / ನಿಯೋಜನೆ ಮಾಡಿರುವುದನ್ನು ಕೂಡಲೇ ರದ್ದುಗೊಳಿಸಿ ವರದಿ ಮಾಡಿಕೊಳ್ಳಲು ಆದೇಶಿಸಲಾಗಿದೆ. ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಇಲ್ಲದೆ ಜಿಲ್ಲಾ ಪಂಚಾಯತಿ / ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಯಾವುದೇ ರೀತಿಯ ವರ್ಗಾವಣೆ / ನಿಯೋಜನೆಗಳನ್ನು ಮಾಡಬಾರದು. ಈ ಆದೇಶ ಪಾಲನೆ ಮಾಡದಿರುವವರ ಹಾಗೂ ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಆದಾಗ್ಯೂ ದಿನಾಂಕ:23-11-2018 ರ ಸರ್ಕಾರದ ಪತ್ರದಲ್ಲಿನ ನಿರ್ದೇಶನವನ್ನು ಉಲ್ಲಂಘಿಸಿ ಉಲ್ಲೇಖ (2) ರಲ್ಲಿ ರಾಮನಗರ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎಂ.ಬಾಬು ರವರು ದಿನಾಂಕ:02-01-2019 ರ ರಾಮನಗರ ಕಾರ್ಯನಿರ್ವಾಹಕ ಅಧಿಕಾರಿಗಳ ಅಧಿಕೃತ ಜ್ಞಾಪನದಲ್ಲಿ ಶ್ರೀ ಶಿವಶಂಕರ್ ವಿ.ಸಿ. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ ಇವರನ್ನು ಬೈರಮಂಗಲ ಗ್ರಾಮ ಪಂಚಾಯತಿಗೆ ಮತ್ತು ಶ್ರೀ ಉಮೇಶ್.ಕೆ, ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ಇವರನ್ನು ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿಗೆ ತಾತ್ಕಾಲಿಕವಾಗಿ ನಿಯೋಜನೆ ಮಾಡಿ ಆದೇಶಿಸಿರುತ್ತಾರೆ.

ಆದುದರಿಂದ ದಿನಾಂಕ:02-01-2019 ರ ರಾಮನಗರ ಕಾರ್ಯನಿರ್ವಾಹಕ ಅಧಿಕಾರಿಗಳ ಅಧಿಕೃತ ಜ್ಞಾಪನದಲ್ಲಿ ಶ್ರೀ ಶಿವಶಂಕರ್ ವಿ.ಸಿ. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ, ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿ ಇವರನ್ನು ಬೈರಮಂಗಲ ಗ್ರಾಮ ಪಂಚಾಯತಿಗೆ ಮತ್ತು ಶ್ರೀ ಉಮೇಶ್.ಕೆ, ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ಇವರನ್ನು ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿಗೆ ತಾತ್ಕಾಲಿಕವಾಗಿ ನಿಯೋಜನೆ ಮಾಡಿರುವುದನ್ನು ಕೂಡಲೇ ರದ್ದುಪಡಿಸುವಂತೆ ಮತ್ತು ಉಲ್ಲೇಖ(1) ಮತ್ತು (3) ರ ದಿನಾಂಕ:23-11-2018 ಮತ್ತು 04-01-2019 ರ ಸರ್ಕಾರದ ಪತ್ರದಲ್ಲಿನ ನಿರ್ದೇಶನದಂತೆ ರಾಮನಗರ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೈಗೊಂಡಿರುವ ಕ್ರಮದ ವರದಿಯನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,
2/2/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

1. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಮಾಗಡಿ.
2. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.